## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 786 (864)

ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ. (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 19.08.2025

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅವಧಿಗೆ ಮುನ್ನ ಹಾಗೂ ಅತಿಯಾದ ನಿರಂತರ ಮಳೆಯಿಂದಾಗಿ ಅಡಿಕೆಗೆ ಕೊಳೆರೋಗ ತೀವ್ರವಾಗಿ ಭಾದಿಸಿರುವುದರಿಂದ ಅಡಿಕೆ ನಳ್ಳಿ (ಮಿಡಿ) ವಿಪರೀತ ಮಟ್ಟದಲ್ಲಿ ಉದುರಿಹೋಗಿ, ಫಸಲು ಕುಸಿದಿರುವುದರಿಂದ ಅಡಿಕೆ ಬೆಳೆಗಾರರಿಗೆ ತುಂಬಾ ನಷ್ಟವಾಗಿದ್ದು, ಅವರು ಆರ್ಥಿಕವಾಗಿ ತೀವ್ರ ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಅಕಾಲಿಕ ಹಾಗೂ ಅತೀ ಮಳೆಯಿಂದಾಗಿ ಅಡಿಕೆ ಬೆಳೆಗಾರರಿಗೆ ಆಗಿರುವ ನಷ್ಟದ ಅಂದಾಜು ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು). | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕಾಲಿಕ ಹಾಗೂ ಅತೀ ಮಳೆಯಿಂದಾಗಿ ಅಡಿಕೆ ಬೆಳೆಗಾರರಿಗೆ ಆಗಿರುವ ನಷ್ಟದ ಅಂದಾಜು ಮೊತ್ತದ ತಾಲ್ಲೂಕುವಾರು ವಿವರ ಕೆಳಕಂಡಂತಿದೆ. |

| ಕ್ರ. ಸಂ. | ತಾಲ್ಲೂಕು | ಹಾನಿಗೊಳಗಾದ ವಿಸ್ತೀರ್ಣ (ಹೆಕ್ಟೇರ್) | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|---|
| 1. | ಮಂಗಳೂರು | 453.98 | 160.7 |
| 2. | ಮೂಡಬಿದ್ರೆ | 1463.61 | 544.1 |
| 3. | ಮುಲ್ಕಿ | 30.00 | 11.5 |
| 4. | ಉಳ್ಳಾಲ | 146.64 | 54.5 |
| 5. | ಬಂಟ್ವಾಳ | 1715.00 | 2195.00 |
| 6. | ಪುತ್ತೂರು | 2100.00 | 420.00 |
| 7. | ಕಡಬ | 2150.00 | 430.00 |
| 8. | ಸುಳ್ಯ | 1100.00 | 105.00 |
| 9. | ಬೆಳ್ತಂಗಡಿ | 1980.00 | 831.60 |
| | **ಒಟ್ಟು** | **11139.23** | **4752.40** |

| | | |
|---|---|---|
| ಇ) | ಜಿಲ್ಲೆಯಲ್ಲಿ ಅಕಾಲಿಕ ಹಾಗೂ ಅತಿಯಾದ ನಿರಂತರ ಮಳೆಯಿಂದಾಗಿ ಆರ್ಥಿಕ ನಷ್ಟಕೊಳಗಾಗಿರುವ ಅಡಿಕೆ ಬೆಳೆಗಾರರಿಗೆ ಯಾವ ರೀತಿಯಲ್ಲಿ ನೆರವು ಮತ್ತು ಸಹಾಯವನ್ನು ಈಗಾಗಲೇ ಒದಗಿಸಲಾಗಿದೆ ಮತ್ತು ಪರಿಹಾರ ನೀಡುವ ನಿಟ್ಟಿನಲ್ಲಿ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಅಡಿಕೆ ಕೊಳೆರೋಗ ನಿಯಂತ್ರಿಸಲು ಇಲಾಖೆಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ:<br><br>1. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ತೆಂಗು ಬೆಳೆ ಸೇರಿದಂತೆ ತೋಟಗಾರಿಕೆ ಬೆಳೆಗಳ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ರೂ.5000/- ಪ್ರತಿ ಹೆಕ್ಟೇರ್ ಘಟಕ ವೆಚ್ಚದ ಶೇ.30ರಂತೆ ಪ್ರತಿ ಹೆಕ್ಟೇರಿಗೆ ರೂ.1500/- ರಂತೆ 2 ಹೆಕ್ಟೇರ್ ರವರೆಗೆ ರೂ.3000/- ಗಳ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ರಾಜ್ಯಕ್ಕೆ ಒಟ್ಟು 525.00 ಲಕ್ಷಗಳ ಅನುದಾನ ನಿಗದಿಪಡಿಸಲಾಗಿದ್ದು ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ರೂ.15.00 ಲಕ್ಷಗಳು ನಿಗಧಿಯಾಗಿದ್ದು, ಈವರೆಗೂ ರೂ. 3.15 ಲಕ್ಷಗಳ ಸಹಾಯಧನವನ್ನು 262 ಫಲಾನುಭವಿಗಳಿಗೆ ಪಾವತಿಸಲಾಗಿರುತ್ತದೆ.<br><br>2. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆಗೆ ಅಡಿಕೆ ಬೆಳೆಯು ಅಧಿಸೂಚಿತವಾಗಿದ್ದು, ಹವಾಮಾನ ವೈಪರೀತ್ಯದಿಂದ ಬೆಳೆ ನಷ್ಟ ಸಂಭವಿಸಿದಲ್ಲಿ ಸದರಿ ಯೋಜನೆಯಡಿ ನಷ್ಟ ಪರಿಹಾರವನ್ನು ಒದಗಿಸಲಾಗುತ್ತಿದೆ. ಪ್ರಸಕ್ತ ಸಾಲಿನ ಕ್ಲೇಮ್ಸ್ (Claims) ಪಾವತಿಗೆ ಲೆಕ್ಕಾಚಾರವು ಪ್ರಗತಿಯಲ್ಲಿರುತ್ತದೆ.<br><br>3. ಅಡಿಕೆ ಬೆಳೆಯ ಕೊಳೆರೋಗದ ಲಕ್ಷಣ ಹಾಗೂ ನಿರ್ವಹಣೆ ಕ್ರಮಗಳ ಕುರಿತು ಇಲಾಖಾ ಅಧಿಕಾರಿಗಳ ವತಿಯಿಂದ ರೈತರ ತಾಕುಗಳಿಗೆ ಭೇಟಿ ನೀಡಿ ನಿರ್ವಹಣೆ ಕ್ರಮಗಳ ಕುರಿತು 32 ತರಬೇತಿ ಹಾಗೂ ಪ್ರಾತ್ಯಕ್ಷತೆ ಕಾರ್ಯಕ್ರಮಗಳನ್ನು ಕೈಗೊಂಡು 2516 ರೈತರಿಗೆ ಅರಿವು ಮೂಡಿಸಲಾಗಿರುತ್ತದೆ.<br><br>4. ಹಿಂದಿನ ಸಾಲಿನಲ್ಲಿ ಬೆಳೆ ಹಾನಿಯಾಗಿರುವ ಅಂದಾಜು 79,123.67 ಹೆಕ್ಟೇರ್ ಪ್ರದೇಶಕ್ಕೆ ಪ್ರತಿ ಹೆಕ್ಟೇರ್ ಗೆ NDRF/SDRF ಮಾರ್ಗಸೂಚಿಯನ್ವಯ ರೂ.22,500/-ಗಳಂತೆ ಅಡಿಕೆ ಕೊಳೆ ರೋಗ ಬಾಧಿತ ರೈತರಿಗೆ ಪರಿಹಾರ ಒದಗಿಸಲು ಕೇಂದ್ರ ಸರ್ಕಾರಕ್ಕೆ ರೂ.178.03 ಕೋಟಿಗಳ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.<br><br>5. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ |
| ಈ) | ಜಿಲ್ಲೆಯ ಅಡಿಕೆ ಬೆಳೆಗಾರರಿಗೆ ತುರ್ತಾಗಿ ಪರಿಹಾರ ನೀಡಲು ಅಗತ್ಯ ಕ್ರಮ ವಹಿಸುವುದರ ಮೂಲಕ ಸಂಕಷ್ಟದಲ್ಲಿರುವ ಅಡಿಕೆ ಬೆಳೆಗಾರರ ಹಿತರಕ್ಷಣೆಗೆ ಸರ್ಕಾರ ಈ ಕೂಡಲೇ ಮುಂದಾಗುವುದೇ? | |

| | | |
|---|---|---|
| | | ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>ಅಡಿಕೆ ಬೆಳೆಗಾರರ ಹಿತರಕ್ಷಣೆಗೆ ಈ ಮೇಲಿನಂತೆ ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: HORTI 366 HGM 2025

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು